# ಕರ್ನಾಟಕ ವಿಧಾನ ಪರಿಷತ್ತು

ಮಾನ್ಯ ವಿಧಾನ ಪರಿಷತ್ತು ಸದಸ್ಯರು : ಶ್ರೀ ಬಿ.ಕೆ ಹರಿಪ್ರಸಾದ್

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 751

ಉತ್ತರಿಸಬೇಕಾದ ದಿನಾಂಕ : 15.12.2020

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ನಂದಿನಿ ಬೂತ್ ಫ್ರಾಂಚೈಗಳನ್ನು ಮಂಜೂರು ಮಾಡಲು ಇರುವ ಮಾನದಂಡಗಳೇನು; | <u>ನಂದಿನಿ ಬೂತ್/ಪಾರ್ಲರ್:</u><br>1. ನಂದಿನಿ ಉತ್ಪನ್ನಗಳನ್ನು ಮಾತ್ರ ಮಾರಾಟ ಮಾಡುವ ಸ್ಥಳಗಳಿಗೆ ಬೂತ್ ಅಥವಾ ಪಾರ್ಲರ್ ಗಳೆಂದು ಕರೆಯಲಾಗುವುದು.<br>2. ಜನಸಂಖ್ಯೆ ಹಾಗೂ ಬೇಡಿಕೆಗೆ ಅನುಗುಣವಾಗಿ ಹಾಲನ್ನು ಪೂರೈಸಲು ಕ್ರಮಕೈಗೊಳ್ಳಲಾಗುತ್ತಿದೆ.<br>3. ಸ್ಥಳೀಯ ಪ್ರದೇಶದಲ್ಲಿರುವ ನಂದಿನಿ ಹಾಲು ಮತ್ತು ಉತ್ಪನ್ನ ಮಾರಾಟ ಮಾಡಲು ಆಸಕ್ತರನ್ನು ಗುರುತಿಸಲಾಗುವುದು, ಹಾಗೂ ಕೆಲವೊಮ್ಮೆ ನೇರವಾಗಿ ಆಸಕ್ತರು ಅರ್ಜಿಗಳನ್ನು ನೀಡಿದಲ್ಲಿ ಪರಿಶೀಲಿಸಿ ಅಗತ್ಯ ಕ್ರಮವಿಡಲಾಗುತ್ತಿದೆ.<br>4. ಅರ್ಜಿದಾರರ ಮಾರಾಟ ಕೌಶಲ್ಯತೆ, ಸ್ಥಳೀಯ ಜನಸಾಮಾನ್ಯರೊಂದಿಗೆ ಒಡನಾಟ ಹಾಗೂ ಬಂಡವಾಳವನ್ನು ಭರಿಸುವ ಸಾಮರ್ಥ್ಯಕ್ಕೆ ಅನುಗುಣವಾಗಿ ನೇಮಕ ಮಾಡಲಾಗುವುದು.<br><br>**<u>ನಂದಿನಿ ಫ್ರಾಂಚೈಸಿ:</u>**<br>1. ಆಸಕ್ತರು ಆಯ್ದಾ ಸ್ಥಳಗಳಲ್ಲಿ ಬಂಡವಾಳ ಹೂಡಿ ಇತರೆ ಉತ್ಪನ್ನಗಳೊಂದಿಗೆ ನಂದಿನಿ ಉತ್ಪನ್ನಗಳನ್ನು ಮಾರಾಟ ಮಾಡುವ ಸ್ಥಳಗಳಿಗೆ ಫ್ರಾಂಚೈಸಿ ಎಂದು ಕರೆಯಲಾಗುತ್ತದೆ.<br>2. ಸ್ಥಳೀಯ ಪ್ರದೇಶದಲ್ಲಿರುವ ನಂದಿನಿ ಹಾಲು ಮತ್ತು ಉತ್ಪನ್ನ ಮಾರಾಟ ಮಾಡಲು ಆಸಕ್ತರನ್ನು ಪರಿಗಣಿಸಲಾಗುವುದು.<br>3. ಆಸಕ್ತರ ಮಾರಾಟ ಕೌಶಲ್ಯತೆ, ಸ್ಥಳೀಯ ಜನಸಾಮಾನ್ಯರೊಂದಿಗೆ ಒಡನಾಟ ಹಾಗೂ ಬಂಡವಾಳವನ್ನು ಭರಿಸುವ ಸಾಮರ್ಥ್ಯಕ್ಕೆ ಅನುಗುಣವಾಗಿ ನೇಮಕ ಮಾಡಲಾಗುವುದು. |

| | | |
|---|---|---|
| ಆ) | ನಂದಿನಿ ಬೂತ್‌ಗಳಲ್ಲಿ ಟೀ ಮತ್ತು ಕಾಫಿಯನ್ನು ಮಾರಾಟ ಮಾಡಲು ಅವಕಾಶವಿದೆಯೇ; | 1) ಪ್ರತ್ಯೇಕ (exclusive) ನಂದಿನಿ ಬೂತ್/ ಪಾರ್ಲರ್‌ಗಳಲ್ಲಿ ಯಾವುದೇ ರೀತಿ ಕಾಫಿ ಮತ್ತುಟೀ ಮಾರಾಟ ಮಾಡಲು ಅವಕಾಶವಿರುವುದಿಲ್ಲ<br>2) ನಂದಿನಿ ಫ್ರಾಂಚೈಸಿಗಳಲ್ಲಿ ಕಾಫಿ ಮತ್ತು ಟೀ ಮಾರಾಟ ಮಾಡಲು ಅವಕಾಶವಿದೆ. |
| ಇ) | ನಂದಿನಿ ಬೂತ್‌ಗಳನ್ನು ಹಂಚಿಕೆ ಮಾಡಿಕೊಂಡು ಉಪ ಗುತ್ತಿಗೆ ನೀಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಅಂತವರ ವಿರುದ್ಧ ಕೈಗೊಂಡ ಕ್ರಮಗಳೇನು? | ನಂದಿನಿ ಬೂತ್‌ಗಳನ್ನು ಉಪ ಗುತ್ತಿಗೆ ನೀಡಿರುವ ಬಗ್ಗೆ ವರದಿಯಾಗಿರುವುದಿಲ್ಲ. |

ಕಡತ ಸಂಖ್ಯೆ: ಸಿಒ 103 ಪಿಎಂಸಿ 2020

(ಎಸ್. ಟಿ. ಸೋಮಶೇಖರ್)
ಸಹಕಾರ ಸಚಿವರು